ಶ್ರೀ ಹೆಚ್.ಸಿ ಶ್ರೀ ಕಂಠಯ್ಯ (ಕಂದಾಯ ಸಚಿವರು)

ಸರ್ವೆ ನಂ.	ವಿಸ್ತೀರ್ಣ (ಎಕರೆಗಳಲ್ಲಿ)
46	32.21
53	2.01
54	18.19
75	20.18
156	40.06
116	ಹಿಡುವಳಿಜಮೀನು

2) ಕೊತ್ತನೂರು ಗ್ರಾಮದ ಸರ್ವೆ ನಂ: 46 ಮತ್ತು 156ರಲ್ಲಿ ಪ್ರತಿ 2.00 ಎಕರೆ.

3) ಇದು ಪರಿಶೀಲನೆಯಲ್ಲಿದೆ.

4) ಒಂದು ಅರ್ಜಿಯನ್ನು ಸ್ವೀಕರಿಸಿದೆ. ದರಖಾಸ್ತು ದಾಖಲಾತಿಗಳನ್ನು ತಯಾರಿಸಿರುವುದಿಲ್ಲ.

ಬಸವನಬಾಗೇವಾಡಿಯಲ್ಲಿ ಬಸ್ ಡಿಪೋ ಕಾಮಗಾರಿಯ ಪ್ರಾರಂಭ

1131 (1353) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬಸವನ ಬಾಗೇವಾಡಿಗೆ ಮಂಜೂರಾಗಿದ್ದ ಬಸ್ ಡಿಪೋ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗಿರುವುದಕ್ಕೆ ಕಾರಣಗಳೇನು?

ಆ) ಸದರಿ ಡಿಪೋದ ಕೆಲಸವನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಎ.ಆರ್. ಸಗೀರ್ ಅಹ್ಮದ್ (ಸಾರಿಗೆ ಸಚಿವರು) :

ಅ) ಈಗ ಸದ್ಯ ಘಟಕ ನಿರ್ಮಾಣಕ್ಕಾಗಿ ನಿವೇಶನದೊರಕಿಸಿಕೊಳ್ಳುವ ಕುರಿತಂತೆ ಪ್ರಯತ್ನಿಸಲಾಗುತ್ತಿದೆ. ಘಟಕ ನಿರ್ಮಾಣಕ್ಕೆ ಯೋಗ್ಯ ನಿವೇಶನ ಪಡೆದುಕೊಂಡ ತರುವಾಯ, ಮುಂದಿನ ಕ್ರಮ ಕೈಗೊಳ್ಳಲಾಗುವುದು. ಆದಾಗ್ಯೂ, ಸರ್ಕಾರದ ಹೊಸ ಆರ್ಥಿಕ ನೀತಿಯಿಂದಾಗಿ ಬಂಡವಾಳ ತೊಡಗಿಸಲು ಸಂಸ್ಥೆಯಲ್ಲಿ ಆರ್ಥಿಕ ದೃಢತೆಯನ್ನು ಅನುಸರಿಸಿ, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಆ) ಬಸ್ ಡಿಪೋ ನಿರ್ಮಿಸಲು ನಿವೇಶನ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಬಸವನ ಬಾಗೇವಾಡಿ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವ ಬಗ್ಗೆ

1132 (1354) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಪ್ರಸಕ್ತವರ್ಷ ಮಳೆ ಬಾರದಿರುವುದರಿಂದ ರೈತರಿಗೆ ತುಂಬಾ ತೊಂದರೆ ಉಂಟಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಬಸವನ ಬಾಗೇವಾಡಿ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ಸದರಿ ಕ್ಷೇತ್ರವನ್ನು ಬರ ಪೀಡಿತ ಕ್ಷೇತ್ರವೆಂದು ಘೋಷಿಸಲು ಸರ್ಕಾರದ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯಸಚಿವರು) :

ಅ) ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಮಳೆಯ ಅಭಾವದಿಂತ ಮುಂಗಾರಿನಲ್ಲಿ ಒಟ್ಟು 51 ಗ್ರಾಮಗಳ ಪೈಕಿ 40 ಗ್ರಾಮಗಳು ಹಾಗೂ ಹಿಂಗಾರಿನಲ್ಲಿ ಒಟ್ಟು 69 ಗ್ರಾಮಗಳ ಪೈಕಿ 31ಗ್ರಾಮದಲ್ಲಿ ಬೆಳೆ ಹಾನಿ ಆಗಿರುವ ವರದಿಯಾಗಿದೆ.

ಆ) ಬಸವನಬಾಗೇವಾಡಿ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಸರ್ಕಾ ಘೋಷಿಸಿಲ್ಲ. ಆದಾಗ್ಯೂ ಅಣೇವಾರಿ ಕಾರ್ಯವನ್ನು ಕೈಗೆತ್ತಿಕೊಂಡಿದ್ದು ಕಾರ್ಯ ಪೂರ್ಣಗೊಂಡ ನಂತರ ಸರ್ಕಾರ ಈ ನಿಟ್ಟಿನಲ್ಲಿ ಪರಿಶೀಲಿಸುವುದು.

ಇ) ಮೇಲಿನ ಉತ್ತರ ಅನ್ವಯಿಸುತ್ತದೆ. ಆದಾಗ್ಯೂ ಈ ಪ್ರದೇಶದಲ್ಲಿ ಬರಪರಿಹಾರ ಕಾರ್ಯಗಳನ್ನು ಕೈಗೆತ್ತಿಕೊಂಡಿದ್ದು ಕುಡಿಯುವ ನೀರಿನ ಸಲುವಾಗಿ ಕೊಳವೆ ಬಾವಿಗಳನ್ನು ಕೊರೆಯಲಾಗುತ್ತಿದೆ. ಅಲ್ಲದೆ, ರಸ್ತೆ ದುರಸ್ತಿ ಕಾರ್ಯ, ಕೆರೆಗಳಲ್ಲಿ ಹೂಳೆತ್ತುವ ಕೆಲಸ ಮತ್ತು ಕೃಷಿ ಕಾರ್ಮಿಕರಿಂದ ಕೃಷಿ ಚಟುವಟಿಕೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಬಸವನಬಾಗೇವಾಡಿಯಲ್ಲಿ ಖಾಲಿಇರುವ ಗ್ರಾಮ ಲೆಕ್ಕಿಗರ ಹುದ್ದೆಗಳು

1133 (1355) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನಬಾಗೇವಾಡಿ ಕ್ಷೇತ್ರದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು;

ಇ) ರಾಜ್ಯದಲ್ಲಿರುವ ಗ್ರಾಮ ಸಹಾಯಕರ ಒಟ್ಟು ಸಂಖ್ಯೆ ಎಷ್ಟು;

ಈ) ಸದರಿ ಗ್ರಾಮ ಸಹಾಯಕರನ್ನು ಖಾಯಂ ಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಸಿ ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಎರಡು

ಆ) ಈ ಹುದ್ದೆಗಳನ್ನು ಅನುಕಂಪದ ಆಧಾರದ ನೇಮಕಾತಿ ಮತ್ತು ದಿನಗೂಲಿ ನೌಕರರಾಗಿ ಸಕ್ರಮಗೊಂಡವರುಗಳಿಂದ ಭರ್ತಿ ಮಾಡಲಾಗುವುದು.